**Akashvani : Bangalore**
**National Bulletin In Kannada**
**01.12.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.12.2024 / 7.35 am**

**<><*<><>*><>**

## ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಉತ್ತರಪ್ರದೇಶ ಪ್ರವಾಸ; ಐಐಟಿ ಕಾನ್ಪುರಕ್ಕೆ ಭೇಟಿ

೨. ಇಂದು ವಿಶ್ವ ಏಡ್ಸ್ ದಿನ; ಎಚ್‌ಐವಿ ಚಿಕಿತ್ಸೆ - ನಿರ್ಮೂಲನೆ ಕುರಿತು ಜಾಗೃತಿ ಅಭಿಯಾನ

೩. ವಹಿವಾಟುಗಳಲ್ಲಿ ಅಮೆರಿಕ ಡಾಲರ್ ಬದಲಾಯಿಸದಂತೆ ಬ್ರಿಕ್ಸ್ ರಾಷ್ಟ್ರಗಳಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒತ್ತಾಯ

೪. ತಮಿಳುನಾಡು ಮತ್ತು ಪುದುಚೇರಿ ಕರಾವಳಿಗೆ ಅಪ್ಪಳಿಸಿದ ಫೆಂಗಲ್ ಚಂಡಮಾರುತ

೫. ಸಯ್ಯದ್ ಮೋದಿ ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಟೂರ್ನಿ; ಪುರುಷರ ಸಿಂಗಲ್ಸ್‌ನಲ್ಲಿ ಲಕ್ಷ್ಯಸೇನ್ ಫೈನಲ್‌ಗೆ ಲಗ್ಗೆ

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಉತ್ತರ ಪ್ರದೇಶದ ಕಾನ್ಪುರಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಜೈಪುರಿಯ ಶಾಲೆಯ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ತಮ್ಮ ಭೇಟಿಯ ವೇಳೆಯ ಅವರು, ಐಐಟಿ ಕಾನ್ಪುರಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಅವರು ವಿದ್ಯಾರ್ಥಿಗಳು ಮತ್ತು ಅಧ್ಯಾಪಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

**<><*<><>*><>**

ಮೂರು ದಿನಗಳ ಒಡಿಶ ಪ್ರವಾಸದಲ್ಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸತತ ಎರಡನೇ ದಿನವಾದ ಇಂದೂ ಸಹ ವಾರ್ಷಿಕ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಇಂದು, ಒಡಿಶಾದ ಭುವನೇಶ್ವರದಲ್ಲಿ ಶುಕ್ರವಾರ ಆರಂಭವಾದ ೩ ದಿನಗಳ ಸಮ್ಮೇಳನದ ಕೊನೆಯ ದಿನವಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಅವರು ದೇಶದ ವಿವಿಧ ಭದ್ರತಾ ಸಂಸ್ಥೆಗಳ ಉನ್ನತ ಪೊಲೀಸ್ ಅಧಿಕಾರಿಗಳು ಮತ್ತು ಮುಖ್ಯಸ್ಥರೊಂದಿಗೆ ವಿವಿಧ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಇದೇ ವೇಳೆ ಪೊಲೀಸರು ಎದುರಿಸುತ್ತಿರುವ ವಿವಿಧ ಕಾರ್ಯಾಚರಣೆ ಮತ್ತು ಮೂಲಸೌಕರ್ಯ ಸಂಬಂಧಿತ ಸಮಸ್ಯೆಗಳ ಬಗ್ಗೆಯೂ ಚರ್ಚಿಸಲಾಗುವುದು. ಆಂತರಿಕ ಭದ್ರತೆ, ನೂತನ ಅಪರಾಧ

ಕಾನೂನುಗಳು, ಕರಾವಳಿ ಭದ್ರತೆ, ಸೈಬರ್ ಕ್ರೈಮ್, ಮಾವೋವಾದಿಗಳ ಬೆದರಿಕೆ, ಕೃತಕ ಬುದ್ಧಿಮತ್ತೆ ಡ್ರೋನ್‌ಗಳಂತಹ ಉದಯೋನ್ಮುಖ ತಂತ್ರಜ್ಞಾನಗಳು ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯತಂತ್ರಗಳು ಒಡ್ಡುವ ಸವಾಲುಗಳಂತಹ ಹಲವು ವಿಷಯಗಳ ಕುರಿತು ಇಂದು ಚರ್ಚೆ ನಡೆಸುವ ನಿರೀಕ್ಷೆಯಿದೆ.

<><*<><>*><>

ಅಕ್ವೈರ್ಡ್ ಇಮ್ಯುನೊ ಡೆಫಿಷಿಯನ್ಸಿ ಸಿಂಡ್ರೋಮ್-ಏಡ್ಸ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಇಂದು ವಿಶ್ವ ಏಡ್ಸ್ ದಿನವನ್ನು ಆಚರಿಸಲಾಗುತ್ತಿದೆ. ಎಚ್‌ಐವಿ ವಿರುದ್ಧದ ಹೋರಾಟದಲ್ಲಿ ಜನರು ಒಂದಾಗಲು ಮತ್ತು ಎಚ್‌ಐವಿ ಯೊಂದಿಗೆ ಬದುಕು ಸಾಗಿಸುತ್ತಿರುವವರಿಗೆ ಬೆಂಬಲ ಸೂಚಿಸಲು ಈ ದಿನವು ಅವಕಾಶವನ್ನು ಒದಗಿಸುತ್ತದೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆಪಿ ನಡ್ಡಾ ಅವರು ಮಧ್ಯಪ್ರದೇಶದ ಇಂದೋರ್‌ನಲ್ಲಿಂದು ವಿಶ್ವ ಏಡ್ಸ್ ದಿನ ೨೦೨೪ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.  ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಗೌರವ ಅತಿಥಿಗಳಾಗಿ ಆಗಮಿಸಲಿದ್ದಾರೆ. ಈ ವರ್ಷದ ವಿಶ್ವ ಏಡ್ಸ್ ದಿನ, ಏಡ್ಸ್ ಕುರಿತು ಜಾಗೃತಿ ಮೂಡಿಸುವುದು, ಚಿಕಿತ್ಸಾ ವಿಧಾನಗಳನ್ನು ಉತ್ತೇಜಿಸುವುದು ಮತ್ತು ಎಚ್‌ಐವಿ-ಏಡ್ಸ್ ನಿಂದ ಪೀಡಿತರ ವಿರುದ್ಧದ ತಾರತಮ್ಯವನ್ನು ತೊಡೆದುಹಾಕುವುದರ ಮೇಲೆ ಕೇಂದ್ರೀಕರಿಸುತ್ತದೆ. 'ಸರಿಯಾದ ಮಾರ್ಗವನ್ನು ತೆಗೆದುಕೊಳ್ಳಿ' ಎಂಬುದು ೨೦೨೪ ರ ಘೋಷವಾಕ್ಯವಾಗಿದೆ. ರಾಷ್ಟ್ರೀಯ ಏಡ್ಸ್ ನಿಯಂತ್ರಣ ಸಂಸ್ಥೆ ಎನ್‌ಎಸಿಒ, ೧೯೯೨ ರಿಂದ ಪ್ರತಿ ವರ್ಷ ಡಿಸೆಂಬರ್ ೧ ರಂದು ವಿಶ್ವ ಏಡ್ಸ್ ದಿನವನ್ನು ಆಚರಿಸುತ್ತಿದೆ. ಈ ಆಚರಣೆಗಳು ೨೦೩೦ ರ ವೇಳೆಗೆ ಏಡ್ಸ್‌ಅನ್ನು ನಿರ್ಮೂಲನೆಗೊಳಿಸುವ ಜಾಗತಿಕ ಗುರಿಯನ್ನು ಅನುಸರಿಸುತ್ತವೆ.

<><*<><>*><>

ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಹೊಸ ಕರೆನ್ಸಿಯನ್ನು ಪರಿಚಯಿಸುವುದಾಗಲಿ ಅಥವಾ ವಹಿವಾಟುಗಳಲ್ಲಿ ಅಮೆರಿಕ ಡಾಲರ್ ಅನ್ನು ಬದಲಿಸಿ ಬೇರೆ ಕರೆನ್ಸಿಗಳನ್ನು ಬೆಂಬಲಿಸುವ ಕೆಲಸ ಮಾಡದಿರಲು ಬದ್ಧವಾಗಿರಬೇಕು, ಇಲ್ಲವಾದಲ್ಲಿ, ೧೦೦ ಪ್ರತಿಶತ ಸುಂಕಗಳನ್ನು ಎದುರಿಸಬೇಕಾಗುತ್ತದೆ ಎಂದು ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒತ್ತಾಯಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಅವರು, ಈ ದೇಶಗಳು ಯುಎಸ್ ಡಾಲರ್ ಅನ್ನು ಬದಲಿಸುವ ಕೆಲಸ ಮಾಡುವುದಿಲ್ಲ ಎಂಬ ಬದ್ಧತೆಯ ಅಗತ್ಯವಿದೆ. ಅಂತರಾಷ್ಟ್ರೀಯ ವ್ಯಾಪಾರದಲ್ಲಿ ಬ್ರಿಕ್ಸ್ ಅಮೆರಿಕಾ ಡಾಲರ್ ಅನ್ನು ಬದಲಿಸುವ ಯಾವುದೇ ಅವಕಾಶವಿಲ್ಲ, ಮತ್ತು ಇದನ್ನು ಪ್ರಯತ್ನಿಸುವ ಯಾವುದೇ ದೇಶ ಅಮೆರಿಕದೊಂದಿಗಿನ ಸಂಬಂಧಗಳಿಗೆ ವಿದಾಯ ಹೇಳಬೇಕಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಫೆಂಗಲ್ ಚಂಡಮಾರುತವು ತಮಿಳುನಾಡು ಮತ್ತು ಪುದುಚೇರಿ ಕರಾವಳಿಯಲ್ಲಿ ಕಾರೈಕಲ್ ಮತ್ತು ಮಹಾಬಲಿಪುರಂ ನಡುವೆ ನಿನ್ನೆ ರಾತ್ರಿ ಅಪ್ಪಳಿಸಿದೆ.  ಚಂಡಮಾರುತವು ನಿಧಾನವಾಗಿ ಪಶ್ಚಿಮ-ನೈಋತ್ಯಕ್ಕೆ ಚಲಿಸುತ್ತಿದೆ ನಂತರ ಅದು ಕ್ರಮೇಣ ದುರ್ಬಲಗೊಳ್ಳಲಿದೆ.  ಚಂಡಮಾರುತದಿಂದಾಗಿ

ಉತ್ತರ ತಮಿಳುನಾಡು ಮತ್ತು ನೆರೆಯ ಪುದುಚೇರಿಯಲ್ಲಿ ಗಾಳಿಯೊಂದಿಗೆ ಭಾರೀ ಮಳೆಯಾಗುತ್ತಿದೆ. ಭಾರೀ ಮಳೆಯಿಂದಾಗಿ ಚೆನ್ನೈ ವಿಮಾನ ನಿಲ್ದಾಣವನ್ನು ಸ್ಥಗಿತಗೊಳಿಸಲಾಗಿತ್ತು. ಚೆನ್ನೈ ನಗರದ ಅನೇಕ ಭಾಗಗಳು ಜಲಾವೃತವಾಗಿವೆ. ಚೆನ್ನೈ ಮತ್ತು ಸಮೀಪದ ಜಿಲ್ಲೆಗಳು ಹಾಗೂ ಪುದುಚೇರಿಯಲ್ಲಿ ಮಳೆಯಿಂದಾಗಿ ಬಸ್, ರೈಲು ಮತ್ತು ವಿಮಾನ ಸೇವೆಗಳು ಸೇರಿದಂತೆ ಸಾರ್ವಜನಿಕ ಸಾರಿಗೆಯ ಮೇಲೆ ಪರಿಣಾಮ ಬೀರಿದೆ. ಮಳೆಯಿಂದ ಜಲಾವೃತಗೊಂಡ ಪ್ರದೇಶದ ಜನರನ್ನು ಅಧಿಕಾರಿಗಳು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಿದ್ದಾರೆ. ಭಾರತೀಯ ಹವಾಮಾನ ಇಲಾಖೆ ಪ್ರಕಾರ ತಮಿಳುನಾಡು, ದಕ್ಷಿಣ ಆಂಧ್ರಪ್ರದೇಶ, ಕೇರಳ ಮತ್ತು ಕರ್ನಾಟಕದ ಒಳನಾಡಿನ ಹಲವು ಭಾಗಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯಿದ್ದು ರೆಡ್ ಅಲರ್ಟ್ ಘೋಷಿಸಲಾಗಿದೆ.

**<><*<><>*><>**

ಮಹಾರಾಷ್ಟ್ರದಲ್ಲಿ ಹೊಸದಾಗಿ ಚುನಾಯಿತ ಮಹಾಯುತಿ ಮೈತ್ರಿಕೂಟ ಸರ್ಕಾರದ ಪ್ರಮಾಣ ವಚನ ಸ್ವೀಕಾರ ಸಮಾರಂಭ ಮುಂಬೈನ ಆಜಾದ್ ಮೈದಾನದಲ್ಲಿ ಡಿಸೆಂಬರ್ ೫ ರಂದು ಸಂಜೆ ೫ ಗಂಟೆಗೆ ನಡೆಯಲಿದೆ. ಈ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ಮಹಾರಾಷ್ಟ್ರ ಅಧ್ಯಕ್ಷ ಚಂದ್ರಶೇಖರ ಬವಾಂಕುಲೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಬಿಜೆಪಿ, ಶಿಂಧೆ ನೇತೃತ್ವದ ಶಿವಸೇನೆ ಮತ್ತು ಎನ್‌ಸಿಪಿ- ಅಜಿತ್ ಪವಾರ್ ಅವರ ಬಣವನ್ನು ಒಳಗೊಂಡಿರುವ ಮಹಾಯುತಿ ಮೈತ್ರಿಕೂಟ ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ೨೮೮ ಸ್ಥಾನಗಳಲ್ಲಿ ೨೩೦ ಸ್ಥಾನಗಳನ್ನು ಗಳಿಸಿತು. ದಾಖಲೆಯ ೧೩೨ ಸ್ಥಾನಗಳೊಂದಿಗೆ ಬಿಜೆಪಿ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಿದರೆ, ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ೫೭ ಸ್ಥಾನಗಳನ್ನು ಮತ್ತು ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ೪೧ ಸ್ಥಾನಗಳನ್ನು ಗೆದ್ದುಕೊಂಡಿದೆ.

**<><*<><>*><>**

ಸುಲಿಗೆ ಪ್ರಕರಣ ಮತ್ತು ನಂದು ಎಂದು ಕರೆಯಲ್ಪಡುವ ದರೋಡೆಕೋರ ಕಪಿಲ್ ಸಾಂಗ್ವಾನ್‌ನೊಂದಿಗೆ ಸಂಪರ್ಕವಿರುವ ಆರೋಪದ ಮೇಲೆ ಆಮ್ ಆದ್ಮಿ ಪಕ್ಷದ ಶಾಸಕ ನರೇಶ್ ಬಲ್ಯಾನ್ ಅವರನ್ನು ದೆಹಲಿ ಪೊಲೀಸರ ಅಪರಾಧ ವಿಭಾಗ ಬಂಧಿಸಿದೆ. ತನಿಖೆಯ ವೇಳೆ ಶಾಸಕ ನರೇಶ್ ಬಲ್ಯಾನ್ ಮತ್ತು ಕಪಿಲ್ ಸಾಂಗ್ವಾನ್ ನಡುವಿನ ಸಂಭಾಷಣೆಯ ಧ್ವನಿಮುದ್ರಣವನ್ನು ವಶಪಡಿಸಿಕೊಂಡ ನಂತರ ಪೊಲೀಸರು ಅವರನ್ನು ಬಂಧಿಸಿದ್ದಾರೆ. ಸಂಭಾಷಣೆಯು ಉದ್ಯಮಿಗಳಿಂದ ಹಣವನ್ನು ಸುಲಿಗೆ ಮಾಡಿ, ಸಂಗ್ರಹಿಸುವ ಬಗ್ಗೆ ಚರ್ಚೆಗಳನ್ನು ಒಳಗೊಂಡಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ಚಿನ ತನಿಖೆ ಪ್ರಗತಿಯಲ್ಲಿದೆ.

**<><*<><>*><>**

ಗುಜರಾತ್‌ಗೆ ಒಂದು ದಿನದ ಪ್ರವಾಸದಲ್ಲಿರುವ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ನಿನ್ನೆ ಸೂರತ್‌ನ ಕಿಮ್‌ನಲ್ಲಿರುವ ಬುಲೆಟ್ ಟ್ರೈನ್ ಟ್ರ್ಯಾಕ್ ಸ್ಲ್ಯಾಬ್ ಉತ್ಪಾದನಾ ಘಟಕಕ್ಕೆ ಭೇಟಿ ನೀಡಿ, ಘಟಕದ ಕಾರ್ಯಾಚರಣೆಯನ್ನು ಪರಿಶೀಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅಶ್ವಿನಿ ವೈಷ್ಣವ್, ಈ ಘಟಕವು ದೇಶದ ಅತಿದೊಡ್ಡ ರೈಲು ಟ್ರ್ಯಾಕ್ ಸ್ಲ್ಯಾಬ್ ಉತ್ಪಾದನಾ ಸೌಲಭ್ಯವಾಗಿದ್ದು, ನಿಖರತೆ ಮತ್ತು ತಂತ್ರಜ್ಞಾನಕ್ಕೆ ಹೆಸರುವಾಸಿಯಾಗಿದೆ ಎಂದರು. ಈ

ಸೌಲಭ್ಯವು ಮುಂಬರುವ ವರ್ಷಗಳಲ್ಲಿ, ದೇಶದ ಭವಿಷ್ಯದ ವಿವಿಧ ನಿರ್ಮಾಣ ಯೋಜನೆಗಳಿಗೆ ಅತ್ಯಂತ ಪ್ರಯೋಜನಕಾರಿಯಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

<><*<><>*><>

ಐಎನ್ಎಸ್ ವಿಕ್ರಮಾದಿತ್ಯದ ನವೀಕರಣಕ್ಕಾಗಿ ಕೊಚ್ಚಿ ಶಿಪ್‌ಯಾರ್ಡ್ ಲಿಮಿಟೆಡ್‌ನೊಂದಿಗೆ ೧ ಸಾವಿರದ ೨೦೦ ಕೋಟಿ ರೂಪಾಯಿಗಳ ಒಪ್ಪಂದಕ್ಕೆ ರಕ್ಷಣಾ ಸಚಿವಾಲಯ ಸಹಿ ಹಾಕಿದೆ. ಭಾರತದ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಉತ್ತಮಪಡಿಸಲು ಕೊಚ್ಚಿ ಶಿಪ್‌ಯಾರ್ಡ್ ಲಿಮಿಟೆಡ್ ಅನ್ನು ನಿರ್ವಹಣೆ, ದುರಸ್ಥಿ ಮತ್ತು ಕೂಲಂಕಶ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಈ ಯೋಜನೆಯು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ೨೦೧೩ ರ ನವೆಂಬರ್‌ನಲ್ಲಿ ಭಾರತೀಯ ನೌಕಾಪಡೆಗೆ ಐಎನ್ಎಸ್ ವಿಕ್ರಮಾದಿತ್ಯ ಸೇರ್ಪಡೆಗೊಂಡಿತು.

<><*<><>*><>

ಭಾರತೀಯ ಸಶಸ್ತ್ರ ಪಡೆಗಳು ಮತ್ತು ಸಿಂಗಾಪುರ ಸಶಸ್ತ್ರ ಪಡೆಗಳ ನಡುವಿನ ಜಂಟಿ ಮಿಲಿಟರಿ ಸಮರಾಭ್ಯಾಸ 'ಅಗ್ನಿ ವಾರಿಯರ್' ೨೦೨೪ ನಿನ್ನೆ ಮಹಾರಾಷ್ಟ್ರದ ದೇವಲಾಲಿಯಲ್ಲಿ ಮುಕ್ತಾಯಗೊಂಡಿತು. ಮೂರು ದಿನಗಳ ಈ ಸಮರಾಭ್ಯಾಸ ನವೆಂಬರ್ ೨೮ ರಂದು ಪ್ರಾರಂಭವಾಗಿತ್ತು. ಉಭಯ ದೇಶಗಳ ಸಮಾರಾಭ್ಯಾಸದ ೧೩ ನೇ ಆವೃತ್ತಿಯಲ್ಲಿ ಸಿಂಗಾಪುರದ ಫಿರಂಗಿದಳದ ೧೮೨ ಸಿಬ್ಬಂದಿ ಮತ್ತು ಭಾರತೀಯ ಸೇನೆಯ ಫಿರಂಗಿದಳದ ೧೧೪ ಸಿಬ್ಬಂದಿ ಭಾಗವಹಿಸಿದ್ದರು. ವಿಶ್ವಸಂಸ್ಥೆಯ ಒಡಂಬಡಿಕೆಯ ಅಡಿಯಲ್ಲಿ ಬಹುರಾಷ್ಟ್ರೀಯ ಶಕ್ತಿಯಾಗಿ ಸಮಬಲ ಸಾಧಿಸಲು ಕವಾಯತು ಮತ್ತು ಕಾರ್ಯವಿಧಾನಗಳ ಪರಸ್ಪರ ತಿಳುವಳಿಕೆಯನ್ನು ಹೆಚ್ಚಿಸುವುದು ಸಮರಾಭ್ಯಾಸದ ಗುರಿಯಾಗಿದೆ. ಈ ಸಮರಾಭ್ಯಾಸವು ಜಂಟಿ ಅಗ್ನಿಶಾಮಕ ಯೋಜನೆ, ಕಾರ್ಯಗತಗೊಳಿಸುವಿಕೆ ಮತ್ತು ಎರಡೂ ಸೇನೆಗಳ ಫಿರಂಗಿದಳದಿಂದ ಹೊಸ ತಲೆಮಾರಿನ ಸಲಕರಣೆಗಳ ಬಳಕೆಯನ್ನು ಪ್ರದರ್ಶಿಸಿತು. ಸೇನೆಯ ಫಿರಂಗಿದಳದ ಮಹಾನಿರ್ದೇಶಕ ಲೆಫ್ಟಿನಿಂಟ್ ಜನರಲ್ ಅದೋಶ್ ಕುಮಾರ್, ಕಮಾಂಡೆಂಟ್ ಸ್ಕೂಲ್ ಆಫ್ ಆರ್ಟಿಲರಿ ಲೆಫ್ಟಿನೆಂಟ್ ಜನರಲ್ ಎನ್.ಎಸ್ ಸರ್ನಾ ಮತ್ತು ಸಿಂಗಾಪುರದ ಸಶಸ್ತ್ರ ಪಡೆಗಳ ಮುಖ್ಯ ಸೇನಾ ಫಿರಂಗದಳದ ಅಧಿಕಾರಿ ಕರ್ನಲ್ ಒಂಗ್ ಚಿಯು ಪರಂಗ್ ಸಮರಾಭ್ಯಾಸಕ್ಕೆ ಸಾಕ್ಷಿಯಾದರು.

<><*<><>*><>

ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ಸಲಹೆಗಾರ ಮೊಹಮ್ಮದ್ ತೌಹಿದ್ ಹೊಸೈನ್ ಅವರು, ಬಾಂಗ್ಲಾದೇಶವು ತನ್ನ ದ್ವಿಪಕ್ಷೀಯ ಹಿತಾಸಕ್ತಿಗಳನ್ನು ಕಾಪಾಡುವುದನ್ನು ಖಾತ್ರಿಪಡಿಸಿಕೊಳ್ಳಲು ಭಾರತದೊಂದಿಗೆ ಸಂಬಂಧವನ್ನು ಕಾಪಾಡಿಕೊಳ್ಳುವ ಭರವಸೆಯನ್ನು ಹೊಂದಿದೆ ಎಂದು ಹೇಳಿದ್ದಾರೆ. ನಿನ್ನೆ ಢಾಕಾದ ನಾರ್ತ್ ಸೌತ್ ವಿಶ್ವವಿದ್ಯಾನಿಲಯದಲ್ಲಿ "ಬಾಂಗ್ಲಾದೇಶ-ಭಾರತ ಸಂಬಂಧಗಳು: ನಿರೀಕ್ಷೆಗಳು, ಅಡೆತಡೆಗಳು ಮತ್ತು ಭವಿಷ್ಯ" ಎಂಬ ಶೀರ್ಷಿಕೆಯ ದುಂಡುಮೇಜಿನ ಚರ್ಚೆಯಲ್ಲಿ ಅವರು ಮಾತನಾಡಿದರು. ಇತ್ತೀಚಿನ ಸವಾಲುಗಳ ಹೊರತಾಗಿಯೂ ಭಾರತದೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಬೆಳೆಸುವ ಮಹತ್ವವನ್ನು ಒತ್ತಿ ಹೇಳಿದ ಅವರು, ಎರಡೂ ರಾಷ್ಟ್ರಗಳು ತಮ್ಮ ಹಿತಾಸಕ್ತಿಗಳನ್ನು ರಕ್ಷಿಸಲು ಕೆಲಸ ಮಾಡಿದರೆ ಬಾಂಗ್ಲಾದೇಶವು ಭಾರತದೊಂದಿಗೆ ಉತ್ತಮ ಬಾಂಧವ್ಯವನ್ನು ಮುಂದುವರಿಸಲು ಸಾಧ್ಯವಾಗುತ್ತದೆ ಎಂದರು.

**<><*<><>*><>**

ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆಯುತ್ತಿರುವ ಸಯ್ಯದ್ ಮೋದಿ ಅಂತಾರಾಷ್ಟ್ರೀಯ ಸೂಪರ್-೩೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ವಿವಿಧ ವಿಭಾಗಗಳ ಫೈನಲ್ ಪಂದ್ಯಗಳಲ್ಲಿ ಭಾರತ ಆಟಗಾರರು ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ. ನಿನ್ನೆ ರಾತ್ರಿ ನಡೆದ ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್ ಪಂದ್ಯದಲ್ಲಿ ಭಾರತದ ಲಕ್ಷ್ಯಸೇನ್, ಜಪಾನ್‌ನ ಶೋಗೊ ಒಗಾವ ವಿರುದ್ಧ ಜಯ ಸಾಧಿಸಿ ಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆಯುವ ಫೈನಲ್ ಪಂದ್ಯದಲ್ಲಿ ಅವರು, ಸಿಂಗಾಪುರದ ಜಿಯಾ ಹೆಂಗ್ ಜೆಸನ್ ತೇಹ್ ವಿರುದ್ಧ ಸೆಣಸಲಿದ್ದಾರೆ. ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿಂದು ಭಾರತದ ಪಿ.ವಿ.ಸಿಂಧೂ ಚೀನಾದ ವೂ ಲುವೊ ಯು ವಿರುದ್ಧ ಸೆಣಸಲಿದ್ದರೆ, ಮಿಶ್ರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿ ಧೃವ ಕಪಿಲಾ ಮತ್ತು ತನಿಷಾ ಕ್ರಾಸ್ಟೊ ಜೋಡಿ ಥೈಲೆಂಡ್ ಜೋಡಿಯೊಂದಿಗೆ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**